ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**
GSTIN : 29AAALB0060D1ZS

ಸಂಖ್ಯೆ :
No.
ಬೆಂಅಪ್ರಾ/ನಯೋಸ/PRL-17/2022-23/2219 /2023-24.
Computer No.184424

ದಿನಾಂಕ :
Date : 12/1/2024

# ಕಾರ್ಯಾದೇಶ

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ]

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರು ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 9.9.2022.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 5.3.3 / 2022, ದಿನಾಂಕ 17.12.2022.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-17/2396/2022-23, ದಿನಾಂಕ 23.12.2022.
4. ಕೆನರಾ ಬ್ಯಾಂಕ್ ಚಲನ್ ನಂ. GN23062034, ದಿನಾಂಕ 26.06.2023.
5. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-17/926/2023-24, ದಿನಾಂಕ 25.07.2023.
6. ಕೆನರಾ ಬ್ಯಾಂಕ್ ಚಲನ್ ನಂ. GN23083124, ದಿನಾಂಕ 02.08.2023.
7. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 5.6.1 / 2023, ದಿನಾಂಕ 25.09.2023.
8. ಈ ಕಛೇರಿ ಅ.ಟಿ. ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-17/1287/2023-24, ದಿನಾಂಕ 14.09.2023.
9. ಅಧಿಕ ಜಿಲ್ಲಾ ನೊಂದಣಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ BDA-1-02800-2023-24, ದಿನಾಂಕ 16.12.2023.

******

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರಿಗೆ ಅನುಮೋದನೆ ನೀಡುವ ಬಗ್ಗೆ.

---

17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅನುಮೋದಿಸಲು ಉಲ್ಲೇಖ [1] ರ ಅರ್ಜಿದಾರರು ಕೋರಿರುತ್ತಾರೆ.

ಉಲ್ಲೇಖ (2) ರಲ್ಲಿ ನಮೂದಿಸಿರುವ ದಿನಾಂಕ 17.12.2022 ರಂದು ಜರುಗಿದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 5.3.3/ 2022 ರ ನಡವಳಿಯಲ್ಲಿ ಚರ್ಚೆಯ ನಂತರ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು 'Demarcation and Development' ಉದ್ದೇಶಕ್ಕೆ ಕೆಲವೊಂದು ಷರತ್ತುಗಳಿಗೊಳಪಟ್ಟು, ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಯಿತು.

ಪ್ರಾಧಿಕಾರದ ಸಮಿತಿ ಸಭೆಯ ನಡವಳಿ ಅನುಸಾರ, ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3] ರ ಈ ಕಛೇರಿ ಪತ್ರದಲ್ಲಿ ವಿವಿಧ ಶುಲ್ಕಗಳ ಬಾಬ್ತು ಒಟ್ಟು ₹.55,22,770/- [₹.ಐವತ್ತೈದು ಲಕ್ಷದ ಇಪ್ಪತ್ತೆರಡು ಸಾವಿರದ ಏಳುನೂರ ಎಪ್ಪತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಲಾಗಿತ್ತು. ಅರ್ಜಿದಾರರು ಉಲ್ಲೇಖ [4] ರಲ್ಲಿ ಪ್ರಾಧಿಕಾರದ ಕೆನರಾ ಬ್ಯಾಂಕ ಚಲನ್ ನಂ. GN23062034 ರ ಮೂಲಕ ದಿನಾಂಕ 26.06.2023 ರಂದು ₹.55,22,770/- [₹.ಐವತ್ತೈದು ಲಕ್ಷದ ಇಪ್ಪತ್ತೆರಡು ಸಾವಿರದ ಏಳುನೂರ ಎಪ್ಪತ್ತು ಮಾತ್ರ] ಪಾವತಿಸಿ ಚಲನ್ ಪ್ರತಿಯನ್ನು ಸಲ್ಲಿಸಿರುತ್ತಾರೆ.

ಅರ್ಜಿದಾರರು ಪಾವತಿಸಿರುವ ಮೊತ್ತವು ಪ್ರಾಧಿಕಾರದ ಖಾತೆಗೆ ಸಂದಾಯವಾಗಿರುವ ಬಗ್ಗೆ ಆರ್ಥಿಕ ಸದಸ್ಯರ ವಿಭಾಗದಿಂದ ದೃಢೀಕರಿಸಿ, 83 ದಿವಸಗಳು ವಿಳಂಬವಾಗಿ ಪಾವತಿಸಿರುವುದರಿಂದ ಸದರಿ ವಿಳಂಬದ ಅವಧಿಗೆ ಬಡ್ಡಿ ಮೊತ್ತವನ್ನು ಪಾವತಿಸಿಕೊಳ್ಳುವಂತೆ ವರದಿ ಮಾಡಿರುತ್ತಾರೆ. ಅದರಂತೆ ಅರ್ಜಿದಾರರಿಗೆ ಉಲ್ಲೇಖ (5) ರಲ್ಲಿ ವಿಳಂಬದ ಅವಧಿಯ ಬಡ್ಡಿ ಮೊತ್ತ ₹.2,11,613/- ಗಳನ್ನು ಪಾವತಿಸಲು ತಿಳಿಸಲಾಗಿತ್ತು. ಅದರಂತೆ ಬಡ್ಡಿ ಮೊತ್ತ ₹.2,11,613/- ಗಳನ್ನು ಪಾವತಿಸಿ ಚಲನ್ ಪ್ರತಿಯನ್ನು ಉಲ್ಲೇಖ (6) ರಲ್ಲಿ ಈ ವಿಭಾಗಕ್ಕೆ ಸಲ್ಲಿಸಿದ್ದು, ಸದರಿ ಮೊತ್ತವು ಪ್ರಾಧಿಕಾರಕ್ಕೆ ಜಮೆ ಆಗಿರುವ ಬಗ್ಗೆ ದಿನಾಂಕ 14.08.2023 ರಂದು ಆರ್ಥಿಕ ಸದಸ್ಯರ ವಿಭಾಗದಿಂದ ದೃಢೀಕರಿಸಿರುತ್ತಾರೆ.

ಉಲ್ಲೇಖ [7] ರಲ್ಲಿ ನಮೂದಿಸಿರುವ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ನಡವಳಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ 83 ದಿವಸಗಳ ವಿಳಂಬದ ಬಡ್ಡಿ ಮೊತ್ತ ₹.2,11,613/- ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿಕೊಂಡಿರುವುದನ್ನು ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮಗಳು 1965 ರ ನಿಯಮ 37-A (2) ರ ಅಡಿಯಲ್ಲಿ ಸ್ಥಿರೀಕರಿಸಲು ಅನುಮೋದಿಸಲು & ದಿನಾಂಕ 17.12.2022 ರ ನಗರ ಯೋಜನಾ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರಿಗೆ ಅನುಮೋದನೆ ನೀಡುವ ಬಗ್ಗೆ.

---

ಸಮಿತಿ ಸಭೆಯ ಠರಾವು ಸಂಖ್ಯೆ 5.3.3/2022 ರ ನಡವಳಿಯಲ್ಲಿ 'ಕೆಂಗೇರಿ ಗ್ರಾಮದ ಸ.ನಂ.63/1 ರ ವಿಸ್ತೀರ್ಣ 6ಎ-16ಗುಂ' ಎಂದು ನಮೂದಿಸಿರುವುದನ್ನು 'ಕುಂಬಳಗೋಡು ಗ್ರಾಮದ ಸ.ನಂ.168, 169, 170 & 171 ರಲ್ಲಿ 8ಎ-00ಗುಂ' ಎಂದು ಸರಿಪಡಿಸಿಕೊಳ್ಳತಕ್ಕದ್ದು ಎಂದು ಸರಿಪಡಿಸಿ ತಿದ್ದುಪಡಿ ಮಾಡಲು ತೀರ್ಮಾನಿಸಲಾಯಿತು.

ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ, ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸುವಂತೆ ಅರ್ಜಿದಾರರಿಗೆ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು [ಪಶ್ಚಿಮ ವಿಭಾಗ], ಇವರಿಗೆ ಉಲ್ಲೇಖ [8] ರ ಈ ಕಛೇರಿಯ ಪತ್ರದಲ್ಲಿ ತಿಳಿಸಲಾಗಿತ್ತು. ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ, ರಸ್ತೆಗಾಗಿ ಕಾಯ್ದಿರಿಸಿರುವ ಪ್ರದೇಶಗಳನ್ನು ದಿನಾಂಕ 16.12.2023 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಉಲ್ಲೇಖ [9] ರಂತೆ ಹಸ್ತಾಂತರಿಸಿಕೊಂಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು 'Demarcation and Development' ಉದ್ದೇಶಕ್ಕೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

| | |
|---|---|
| 1. | ರೇರಾ ಅಧಿನಿಯಮ 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 2. | ಪ್ರಸ್ತಾವನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 3. | ವಸತಿ ಬಡಾವಣೆ ನಕ್ಷೆಯಂತೆ ವಿವಿಧ ಅಳತೆಯ ಒಟ್ಟು 149 ವಸತಿ ನಿವೇಶನಗಳಿದ್ದು (124 ವಿವಿಧ ಅಳತೆಯ ನಿವೇಶನಗಳು + 25 EWS ನಿವೇಶನಗಳು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ಅನುಮೋದಿತ ಬಡಾವಣೆ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ & ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸಲ್ಲಿಸಿರುವ ಪ್ರಮಾಣ ಪತ್ರದ ಅನುಸಾರ ಪ್ರಶ್ನಿತ ಜಮೀನುಗಳಲ್ಲಿ ಹಾದು ಹೋಗಿರುವ 11 ಕೆ.ವಿ. ವಿದ್ಯುತ್ ಶಕ್ತಿ ಮಾರ್ಗವನ್ನು ವಿದ್ಯುತ್ ಕಂಪನಿಯ ನಿಯಮಾನುಸಾರ ಉದ್ಯಾನವನ-3 ಮತ್ತು ರಸ್ತೆಬದಿಗೆ ಬರುವಂತೆ ಸ್ಥಳಾಂತರಿಸಿದ ನಂತರ ಅಂತಿಮ ವಿನ್ಯಾಸ ನಕ್ಷೆ ಅನುಮೋದನೆ ಪಡೆಯತಕ್ಕದ್ದು. |

---

| | |
|---|---|
| 4. | ಅನುಮೋದಿತ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 5. | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿಗಾಗಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 6. | ಉದ್ಯಾನವನ ಮತ್ತು ಬಯಲುಜಾಗಗಳನ್ನು ಅನುಮೋದಿತ ಬಡಾವಣೆ ನಕ್ಷೆ ಪ್ರಕಾರ ಶೇ.100 ರಷ್ಟು ನಿವೇಶನಗಳ ಬಿಡುಗಡೆ ಕೋರುವ ಮೊದಲು Chain link Fencing ಮಾಡಿ ಹಾಗೂ ಅಭಿವೃದ್ಧಿಪಡಿಸುವುದು. |
| 7. | ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 8. | ಬಫರ್ ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು |
| 9. | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಬಡಾವಣೆ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 10. | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ಸುಳ್ಳು ದಾಖಲೆ ಅಥವಾ ಇನ್ನಿತರ ಪೋರ್ಜರಿ ದಾಖಿಲಾತಿಗಳನ್ನು ನೀಡಿರುವುದು ರುಜುವಾತದಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯನ್ನು KTCP ಕಾಯ್ದೆ ಕಲಂ 76 (O) ರ ಅಡಿಯಲ್ಲಿ ರದ್ದುಪಡಿಸಲು ಕ್ರಮವಹಿಸಲಾಗುವುದು. |
| 11. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 12. | ಪ್ರಸ್ತಾಪಿತ ವಿನ್ಯಾಸದಲ್ಲಿನ ವಸತಿ ಅಭಿವೃದ್ಧಿಗಳಿಂದ ಉತ್ಪಾದನೆಯಾಗುವ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಗಳಾಗಿ ವಿಂಗಡಿಸಲು ಹಾಗೂ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 13. | ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರಿಗೆ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 14. | ವಸತಿ ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 15. | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2ಬಿ ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿದ ನಂತರ, ಸಕ್ಷಮ ಪ್ರಾಧಿಕಾರಗಳಿಂದ ಸಿವಿಲ್, ವಿದ್ಯುತ್, ಒಳಚರಂಡಿ ಮತ್ತು ನೀರು ಸರಬರಾಜು ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಪ್ರಮಾಣ ಪತ್ರಗಳೊಂದಿಗೆ ಕೋರಿಕೆ ಸಲ್ಲಿಸಿದಲ್ಲಿ ಅಂತಿಮ ವಿನ್ಯಾಸವನ್ನು ಮತ್ತು ನಿವೇಶನಗಳನ್ನು ಬಿಡುಗಡೆಗೊಳಿಸಲಾಗುವುದು. |
| 16. | ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 17. | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |
| 18. | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 19. | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ, ಕುಡಿಯುವ ನೀರಿನ ಹಾಗೂ ಇತರೆ ಉಪಯೋಗದ ನೀರು ಸರಬರಾಜು ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಅಳವಡಿಸತಕ್ಕದ್ದು. |
| 20. | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಅದೇ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 21. | BESCOM ನಿರ್ದೇಶನದಂತೆ ಬಡಾವಣೆಯಲ್ಲಿ ವಿದ್ಯುತ್ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 22. | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು ಆರ್ಥಿಕ ಹಿಂದುಳಿದ ವರ್ಗದವರಿಗಾಗಿ (EWS) ಮತ್ತು ಕಡಿಮೆ ಆದಾಯ ವರ್ಗದವರಿಗಾಗಿ (LIG) ಕಾಯ್ದಿರಿಸಕ್ಕದ್ದು, ಆ ವರ್ಗದವರಿಗೆ ನಿವೇಶನವನ್ನು ಹಂಚಿಕೆ ಮಾಡತಕ್ಕದ್ದು. ಆರ್ಥಿಕ ದುರ್ಬಲ ವರ್ಗದವರಿಗಾಗಿ (EWS) ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದ್ದಲ್ಲಿ ಮೂಲ ಆಶಯ ವಿಫಲವಾಗುವುದರಿಂದ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ (EWS) ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರಿಗೆ ಅನುಮೋದನೆ ನೀಡುವ ಬಗ್ಗೆ.

---

| | |
|---|---|
| 23. | ತಾತ್ಕಾಲಿಕ ವಸತಿ ಬಡಾವಣೆಯಲ್ಲಿನ ಅಭಿವೃದ್ಧಿ ಕಾರ್ಯಗಳನ್ನು ಅನುಮೋದನೆ ದಿನದಿಂದ 3 ವರ್ಷದೊಳಗಾಗಿ ಪೂರ್ಣಗೊಳಿಸಿ, BWSSB / KUWSDB/RWS, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಸಂಬಂಧಿತ ಇತರ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರಾಧಿಕಾರಕ್ಕೆ ಸಲ್ಲಿಸುವುದು. ವಿಳಂಬವಾದಲ್ಲಿ ಅವಧಿ ವಿಸ್ತರಣೆಗೆ ಪ್ರಾಧಿಕಾರದ ಪೂರ್ವಾನುಮತಿ ಪಡೆಯತಕ್ಕದ್ದು. |
| 24. | ಬಡಾವಣೆ ನಕ್ಷೆಯಲ್ಲಿ Transformer Yard, RWH, STP, OHT, SWM ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |
| 25. | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಆಯುಕ್ತರು,
ಬೆಂಅಪ್ರಾ, ಬೆಂಗಳೂರು

ಇವರಿಗೆ,

ಶ್ರೀ.ಪ್ರಕಾಶನಾಥಸ್ವಾಮಿ,
ಸಿ.ಎ-17, 1ನೇ ಬಿ ಮುಖ್ಯರಸ್ತೆ,
ವಿಜಯನಗರ, ಬೆಂಗಳೂರು.

ಪ್ರತಿಯನ್ನು:-

1. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ, ಕರ್ನಾಟಕ, [RERA], ಸಿಲ್ವರ್ ಜ್ಯೂಬಿಲಿ ಬ್ಲಾಕ್, 3 ನೇ ಕ್ರಾಸ್ ರಸ್ತೆ, ಸಂಪಂಗಿರಾಮನಗರ, ಬೆಂಗಳೂರು-560 002 ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಕಾರ್ಯಪಾಲಕ ಅಭಿಯಂತರರು [ಪಶ್ಚಿಮ ವಿಭಾಗ], ಬೆಂಅಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ಅನುಮೋದಿತ ವಿನ್ಯಾಸ ನಕ್ಷೆಯೊಂದಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ, ತಾತ್ಕಾಲಿಕ ವಿನ್ಯಾಸ ನಕ್ಷೆಯಂತೆಯೇ ಅಭಿವೃದ್ಧಿಯಾಗುತ್ತಿರುವ ಬಗ್ಗೆ ನಿಗಾ ವಹಿಸುವುದು.
3. ಕಂದಾಯ ಅಧಿಕಾರಿಗಳು [ಪಶ್ಚಿಮ ವಿಭಾಗ], ವಿಜಯನಗರ ಬಿಡಿಎ ಕಾಂಪ್ಲೆಕ್ಸ್, ಬೆಂಅಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ಅನುಮೋದಿತ ವಿನ್ಯಾಸ ನಕ್ಷೆಯೊಂದಿಗೆ ಮಾಹಿತಿಗಾಗಿ ಕಳುಹಿಸಿದೆ.

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕುಂಬಳಗೋಡು ಗ್ರಾಮದ ಸರ್ವೆ ನಂ.168 ರಲ್ಲಿ 2ಎ-00ಗುಂ, ಸ.ನಂ.169 ರಲ್ಲಿ 2ಎ-00ಗುಂ, ಸ.ನಂ.170 ರಲ್ಲಿ 2ಎ-00ಗುಂ ಮತ್ತು ಸ.ನಂ.171 ರಲ್ಲಿ 2ಎ-00ಗುಂ, ಒಟ್ಟು 8ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅರ್ಜಿದಾರರಾದ ಶ್ರೀ.ಪ್ರಕಾಶನಾಥಸ್ವಾಮಿ ರವರಿಗೆ ಅನುಮೋದನೆ ನೀಡುವ ಬಗ್ಗೆ.

---

4. ಸಿಸ್ಟಮ್ ಮ್ಯಾನೇಜರ್, EDP ಶಾಖೆ ರವರಿಗೆ ಕಳುಹಿಸುತ್ತಾ, ಇದರೊಂದಿಗೆ ಲಗತ್ತಿಸಿರುವ ಸಿ.ಡಿ.ಯಲ್ಲಿ ದಾಖಲಿಸಲಾದ ವಸತಿ ವಿನ್ಯಾಸ ನಕ್ಷೆಯ ನೀಲಿ ನಕ್ಷೆ ಮತ್ತು ಕಾರ್ಯಾದೇಶ ಇವುಗಳನ್ನು ಪ್ರಾಧಿಕಾರದ Website ನಲ್ಲಿ ಪ್ರಚುರಪಡಿಸಲು ತಿಳಿಸಲಾಗಿದೆ.

**ಸೂಚನೆ :** 1. ಸಂಬಂಧ ಪಟ್ಟ ತಾಂತ್ರಿಕ ವಿಷಯ ನಿರ್ವಾಹಕರು, ತಾತ್ಕಾಲಿಕ ಅನುಮೋದನೆಗೊಂಡ ನಕ್ಷೆಯನ್ನು ಸಿ.ಡಿ. ಯಲ್ಲಿ ದಾಖಲಿಸಿ, ದಾಖಲು ವಿಭಾಗಕ್ಕೆ ನೀಡುವುದು.

2. ಸದರಿ ವಸತಿ ವಿನ್ಯಾಸ ನಕ್ಷೆಯ ವಿವರಗಳನ್ನು, ಕಾರ್ಯಾದೇಶದ ವಹಿಯ ಪುಟ ಸಂಖ್ಯೆ ರಲ್ಲಿ ನಮೂದಿಸಿದೆ.

Housiey.com